**ಸಾಕ್ಷಿಯನ್ನು ದಿಃ 30.05.2026 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಸಾಕ್ಷಿಯು ನಿಪಿ. 1 ರಿಂದ 13 ದಾಖಲೆಗಳನ್ನು ನೋಡಿ ಗುರುತಿಸಿದ್ದಾರೆ.

73 ಔಷಧಿ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 14 ಎಂದು,

32 ಸಲಹಾ ಚೀಟಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 15 ಎಂದು,

4 ಎಕ್ಸ್ ರೇ ಫಿಲಂಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 16 ಎಂದು,

1 ರಿಂದ 3 ನೇ ಅರ್ಜಿದಾರರ ಆಧಾರ್ ಕಾರ್ಡ್ ಮತ್ತು ಪಾನ್ ಕಾರ್ಡ್ ಗಳ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 17 ಎಂದು ಗುರುತಿಸಲಾಯಿತು. ಆದುದರಿಂದ ನಾನು ಕೋರಿರುವಂತೆ ಅರ್ಜಿಯನ್ನು ಪುರಸ್ಕರಿಸಬೇಕಾಗಿ ಪ್ರಾರ್ಥಿಸುತ್ತೇನೆ.

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದಃ**

ಸಮಯಾವಕಾಶವನ್ನು ಕೋರಿದ್ದು ನೀಡಲಾಯಿತು.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.